# ಒಬದ್ಯ

### ಎದೋಮ್ ಶಿಕ್ಷಿಸಲ್ಪಡುವದು

ಒಬದ್ಯನಿಗೆ ಆದ ದೈವದರ್ಶನ. ನನ್ನ ಒಡೆಯನಾದ ಯೆಹೋವನು ಎದೋಮಿನ ಬಗ್ಗೆ ಹೀಗೆ ಹೇಳುತ್ತಾನೆ:

ದೇವರಾದ ಯೆಹೋವನಿಂದ ನಾವು ಒಂದು ಸುದ್ಧಿ
ಕೇಳಿದೆವು. ಒಬ್ಬ ಸಂದೇಶ ದೂತನು ಜನಾಂಗಗಳ
ಕಡೆಗೆ ಕಳುಹಿಸಲ್ಪಟ್ಟನು. ಅವನು ಹೇಳಿದ್ದೇ
ನೆಂದರೆ, ''ಬನ್ನಿ, ನಾವು ಎದೋಮಿಗೆ ವಿರುದ್ಧ
ವಾಗಿ ಯುದ್ಧಮಾಡೋಣ.''

### ಯೆಹೋವನು ಎದೋಮಿನೊಂದಿಗೆ ಮಾತನಾಡುತ್ತಾನೆ

2 ''ಎದೋಮೇ, ನಿನ್ನನ್ನು ನಾನು ಅತ್ಯಂತ ಚಿಕ್ಕದಾದ
ಜನಾಂಗವನ್ನಾಗಿ ಮಾಡುವೆನು. ಎಲ್ಲರೂ ನಿನ್ನನ್ನು
ಹೆಚ್ಚಾಗಿ ಹಗೆ ಮಾಡುವರು.
3 ನಿನ್ನ ಹೆಚ್ಚಳಿಕೆಯು ನಿನ್ನನ್ನು ಮರುಳುಗೊಳಿಸಿತು.
ನೀನು ಎತ್ತರವಾದ ಬೆಟ್ಟದಂಚಿನ ಗುಹೆಗಳಲ್ಲಿ
ವಾಸಿಸುವೆ. ನಿನ್ನ ಮನೆಯು ಪರ್ವತಗಳಲ್ಲಿದೆ.
ಆದುದರಿಂದ ನೀನು ನಿನ್ನಲ್ಲಿ ಹೇಳಿಕೊಳ್ಳುವದೇ
ನಂದರೆ, 'ಯಾರೂ ನನ್ನನ್ನು ಕೆಳಗೆ ಭೂಮಿಯ
ಮೇಲೆ ಇಳಿಸಲಾರರು.'''

### ಎದೋಮನು ಅದೋಗತಿಗೆ ಸೇರುವನು

4 ದೇವರಾದ ಯೆಹೋವನು ಹೀಗೆ ಹೇಳುತ್ತಾನೆ:
''ನೀನು ಹದ್ದಿನಂತೆ ಉನ್ನತದಲ್ಲಿ ಹಾರಾಡಿದರೂ,
ನಕ್ಷತ್ರಗಳಲ್ಲಿ ಗೂಡ ಕಟ್ಟಿದರೂ ಸಹ ಅಲ್ಲಿಂದಲೂ
ನಾನು ನಿನ್ನನ್ನು ಕೆಳಕ್ಕೆ ತರುವೆನು.''
5 ನೀನು ಸಂಪೂರ್ಣವಾಗಿ ನಾಶವಾಗುವೆ. ಕಳ್ಳರು
ನಿನ್ನ ಬಳಿಗೆ ಬರುವರು, ದರೋಡೆಗಾರರು ರಾತ್ರಿ
ವೇಳೆ ಬರುವರು. ಅವರು ತಮಗೆ ಇಷ್ಟಬಂದದ್ದ
ನ್ನೆಲ್ಲಾ ದೋಚುವರು. ನಿನ್ನ ತೋಟದಲ್ಲಿ ಕೆಲಸ
ಗಾರರು ದ್ರಾಕ್ಷೆಯನ್ನು ಕೊಯ್ಯುವಾಗ ಕೆಲ
ವೊಂದನ್ನು ಬಿಟ್ಟು ಬಿಡುವರು.
6 ಆದರೆ ವೈರಿಯು ಏಸಾವಿನ ಗುಪ್ತನಿಧಿಗಾಗಿ
ಹುಡುಕುವರು; ಅವರು ಎಲ್ಲವನ್ನು ಕಂಡು
ಹಿಡಿಯುವರು.
7 ನಿನ್ನ ಸ್ನೇಹಿತರಂತಿದ್ದ ಜನರೆಲ್ಲರೂ ಸೇರಿ ನಿನ್ನನ್ನು
ನಿನ್ನ ದೇಶದಿಂದ ಹೊರಗಟ್ಟುವರು. ನಿನ್ನೊಡನೆ
ಸಮಾಧಾನದಲ್ಲಿದ್ದ ಜನರು ನಿನ್ನನ್ನು ಮೋಸಪಡಿಸಿ
ಸೋಲಿಸುವರು. ನಿನ್ನೊಂದಿಗೆ ಯುದ್ಧದಲ್ಲಿ
ಹೋರಾಡಿದವನು ನಿನ್ನನ್ನು ಉರುಲಿನಲ್ಲಿ ಸಿಕ್ಕಿಸು
ವನು. 'ಆದರೆ ಅದು ನಿನಗೆ ತಿಳಿಯುವುದೇ ಇಲ್ಲ'
ಎಂದು ಅನ್ನುವರು.
8 ಯೆಹೋವನು ಹೇಳುವುದೇನಂದರೆ, ''ಆ ದಿವಸ
ದಲ್ಲಿ ಎದೋಮಿನಲ್ಲಿರುವ ಬುದ್ಧಿವಂತರನ್ನು ನಾಶ
ಮಾಡುವೆನು. ಏಸಾವಿನ ಪರ್ವತದಲ್ಲಿರುವ ಜಾಣ
ರನ್ನು ನಾನು ನಾಶಮಾಡುವೆನು.
9 ತೇಮಾನನೇ, ನಿನ್ನ ಯುದ್ಧವೀರರು ಭಯಪಡು
ವರು. ಏಸಾವಿನ ಪರ್ವತದಲ್ಲಿರುವ ಪ್ರತಿಯೊ
ಬ್ಬನು ನಾಶವಾಗುವನು. ಎಷ್ಟೋ ಮಂದಿ ಹತ
ರಾಗುವರು.

10 ನೀನು ನಾಚಿಕೆಯಿಂದ ಮುಚ್ಚಲ್ಪಡುವೆ, ನಿರಂತ
ರಕ್ಕೂ ನಾಶವಾಗುವೆ. ಯಾಕೆಂದರೆ ನೀನು ನಿನ್ನ
ಸಹೋದರನಾದ ಯಾಕೋಬನೊಂದಿಗೆ ಕ್ರೂರ
ವಾಗಿ ನಡೆದುಕೊಂಡೆ.
11 ನೀನು ಇಸ್ರೇಲರ ವೈರಿಯೊಂದಿಗೆ ಸೇರಿಕೊಂಡೆ.
ಅನ್ಯರು ಇಸ್ರೇಲಿನ ಐಶ್ವರ್ಯವನ್ನು ಎತ್ತಿಕೊಂಡು
ಹೋದರು. ಪರದೇಶಿಗಳು ಇಸ್ರೇಲ್ ಪಟ್ಟಣದ
ಬಾಗಿಲನ್ನು ಪ್ರವೇಶಿಸಿದರು. ಆ ಪರದೇಶಿಗಳು
ಜೆರುಸಲೇಮಿನ ಯಾವ ಭಾಗ ತಮಗೆ ದೊರಕ
ಬೇಕೆಂದು ಚೀಟುಹಾಕಿದರು. ಆಗ ನೀನು ನಿನ್ನ
ಪಾಲನ್ನು ತೆಗೆದುಕೊಳ್ಳಲು ಅವರೊಂದಿಗಿದ್ದೆ.
12 ನಿನ್ನ ಸಹೋದರನ ಸಂಕಟದಲ್ಲಿ ನೀನು ಹರ್ಷಿಸಿದೆ.
ನೀನು ಹಾಗೆ ಮಾಡಬಾರದಾಗಿತ್ತು. ಯೆಹೂದ
ವನ್ನು ನಾಶಮಾಡುವಾಗ ನೀನು ಸಂತೋಷಪಟ್ಟೆ.
ನೀನು ಹಾಗೆ ಮಾಡಬಾರದಾಗಿತ್ತು. ನೀನು ಅವರ

ಸಂಕಟ ಕಾಲದಲ್ಲಿ ಕೊಚ್ಚಿಕೊಂಡೆ. ನೀನು ಹಾಗೆ
ಮಾಡಬಾರದಾಗಿತ್ತು.
13 ನನ್ನ ಜನರ ನಗರದ ಬಾಗಿಲನ್ನು ನೀನು ಪ್ರವೇಶಿಸಿ
ಅವರ ತೊಂದರೆಗಳನ್ನು ನೋಡಿ ನೀನು ಹಾಸ್ಯ
ಮಾಡಿದೆ. ನೀನು ಹಾಗೆ ಮಾಡಬಾರದಾಗಿತ್ತು.
ಅವರು ಸಂಕಟಪಡುತ್ತಿರುವಾಗ ನೀನು ಅವರ
ಐಶ್ವರ್ಯವನ್ನು ಸೂರೆ ಮಾಡಿದೆ. ನೀನು ಹಾಗೆ
ಮಾಡಬಾರದಿತ್ತು.
14 ದಾರಿಯ ಚೌಕದಲ್ಲಿ ನೀನು ನಿಂತುಕೊಂಡು ತಪ್ಪಿಸಿ
ಕೊಂಡು ಹೋಗುವವರನ್ನು ನೀನು ಸಾಯಿಸಿದೆ.
ನೀನು ಹಾಗೆ ಮಾಡಬಾರದಾಗಿತ್ತು. ತಪ್ಪಿಸಿ
ಕೊಂಡು ಹೋದವರನ್ನು ನೀನು ಸೆರೆಹಿಡಿದೆ.
ನೀನು ಹಾಗೆ ಮಾಡಬಾರದಾಗಿತ್ತು.
15 ಎಲ್ಲಾ ಜನಾಂಗಗಳವರಿಗೆ ಯೆಹೋವನ ದಿನವು
ಬೇಗನೇ ಬರುವದು. ನೀನು ಬೇರೆಯವರಿಗೆ
ಮಾಡಿದ ದುಷ್ಟಕೃತ್ಯಗಳನ್ನು ಅವರು ನಿನ್ನ
ಮೇಲೆಯೇ ನಡೆಸುವರು. ಅದೇ ದುಷ್ಟಕಾರ್ಯ
ಗಳು ನಿನ್ನ ತಲೆ ಮೇಲೆ ಬೀಳುವವು.
16 ಯಾಕೆಂದರೆ ನನ್ನ ಪರಿಶುದ್ಧ ಪರ್ವತದಲ್ಲಿ ರಕ್ತ
ವನ್ನು ಸುರಿಸಿದೆ. ನೀನು ಹುಟ್ಟಲೇ ಇಲ್ಲ ಎಂಬು
ದಾಗಿ ಅನಿಸುವದು. ಆದ್ದರಿಂದ ಇತರ ಜನಾಂಗ
ಗಳು ನಿನ್ನ ರಕ್ತವನ್ನು ಸುರಿಸುತ್ತವೆ. ನೀನು ಕೊನೆ
ಗೊಳ್ಳುವೆ.
17 ಆದರೆ ಚೀಯೋನ್ ಬೆಟ್ಟದಲ್ಲಿ ಅಳಿದುಳಿದವರು
ಇರುವರು. ಅವರು ನನ್ನ ವಿಶೇಷ ಜನರಾಗಿರು
ವರು. ಯಾಕೋಬನ ಜನರು ತಮಗೆ ಸೇರಿರುವ
ದನ್ನು ಹಿಂದಕ್ಕೆ ಪಡಕೊಳ್ಳುವರು.
18 ಯಾಕೋಬನ ಸಂತತಿಯವರು ಬೆಂಕಿಯಂತಿರು
ವರು. ಯೋಸೇಫನ ಜನಾಂಗವು ಬೆಂಕಿಯ
ನಾಲಗೆಗಳಂತೆ ಇರುವರು. ಆದರೆ ಏಸಾವಿನ
ಜನಾಂಗ ಸುಟ್ಟ ಬೂದಿಯಂತಿರುವರು. ಯೆಹೂ
ದದ ಜನರು ಏದೋಮನನ್ನು ಸುಟ್ಟುಹಾಕುವರು.
ಯೆಹೂದದ ಜನರು ಏದೋಮನನ್ನು ನಾಶ
ಮಾಡುವರು. ಆಗ ಏಸಾವಿನ ಜನರಲ್ಲಿ ಯಾರೂ
ಉಳಿಯುವದಿಲ್ಲ.'' ಯಾಕೆಂದರೆ ಇದು ದೇವ
ರಾದ ಯೆಹೋವನ ಮಾತು.
19 ಆಗ ನೆಗೆವಿನ ಜನರು ಏಸಾವಿನ ಪರ್ವತಗಳಲ್ಲಿ
ವಾಸಿಸುವರು. ಬೆಟ್ಟದ ಕೆಳಗೆ ವಾಸಿಸುವವರು
ಫಿಲಿಷ್ಟಿಯರ ದೇಶವನ್ನು ಆಕ್ರಮಿಸುವರು. ಎಫ್ರಾ
ಯೀಮ್ ಮತ್ತು ಸಮಾರ್ಯದ ಜನರು ಜೀವಿಸು
ವರು. ಗಿಲ್ಯಾದ್ ಪ್ರಾಂತ್ಯವು ಬೆನ್ಯಾಮೀನರಿಗೆ
ಸೇರುವದು.
20 ಸೆರೆ ಒಯ್ಯಲ್ಪಟ್ಟ ಇಸ್ರೇಲರು ಚಾರೆಪ್ತದವರೆಗೆ
ಕಾನಾನ್ ದೇಶವನ್ನು ವಶಪಡಿಸಿಕೊಳ್ಳುವರು.
ಸೆಫಾರದಿನಲ್ಲಿ ಸೆರೆಯಾಗಿರುವ ಜೆರುಸಲೇಮಿನ
ವರು ನೆಗೆವಿನ ಪಟ್ಟಣಗಳನ್ನು ವಶಪಡಿಸಿ
ಕೊಳ್ಳುವರು.
21 ವಿಜಯಿಗಳು ಚೀಯೋನ್ ಬೆಟ್ಟವನ್ನೇರಿ ಏಸಾ
ವಿನ ಪರ್ವತಗಳಲ್ಲಿ ವಾಸಿಸುವ ಜನರನ್ನಾಳುವರು.
ಆಗ ಸಾಮ್ರಾಜ್ಯವು ಯೆಹೋವನಿಗೆ ಸೇರುವುದು.

